Akashvani : Bangalore
Regional Bulletin In Kannada
20.10.2025 / 6.40 pm
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಪಟಾಕಿ ಅವಘಡ ಹಿನ್ನೆಲೆ; ಬೆಂಗಳೂರಿನ ಮಿಂಟೋ, ಮೈಸೂರಿನ ಕೆ.ಆರ್.ಆಸ್ಪತ್ರೆಯಲ್ಲಿ ವಿಶೇಷ ವಾರ್ಡ್
- ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸೌಹಾರ್ದತೆ ನೆಲೆಸಿದಾಗ ಮಾತ್ರ ಅಭಿವೃದ್ಧಿ ಸಾಧ್ಯ - ಮುಖ್ಯಮಂತ್ರಿ ಸಿದ್ದರಾಮಯ್ಯ
- ಶೀಘ್ರವೇ ೧೩ಸಾವಿರ ಶಾಲಾ ಶಿಕ್ಷಕರ ನೇಮಕಾತಿ - ಸಚಿವ ಮಧುಬಂಗಾರಪ್ಪ
- ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ - ಸಂಸದ ಜಗದೀಶ್ ಶೆಟ್ಟರ್ ಆರೋಪ
- ಲಕ್ಷಾಂತರ ಭಕ್ತರಿಂದ ಇಂದು ಹಾಸನಾಂಬೆ ದರ್ಶನ; ಬುಧವಾರ ಸಾರ್ವಜನಿಕ ದರ್ಶನಕ್ಕೆ ಕೊನೆಯ ದಿನ

***************

ದೀಪಾವಳಿ ಹಬ್ಬದ ಸಂದರ್ಭದಲ್ಲಿ ಪಟಾಕಿ ಅವಘಡಗಳು ನಡೆಯುವ ಹಿನ್ನೆಲೆಯಲ್ಲಿ ಬೆಂಗಳೂರಿನ ಮಿಂಟೋ ಆಸ್ಪತ್ರೆ ಸಜ್ಜಾಗಿದ್ದು, ದಿನದ ೨೪ ಗಂಟೆಯೂ ಸೇವೆ ಒದಗಿಸಲಿದೆ. ಪಟಾಕಿ ಸಿಡಿತದಿಂದ ಕಣ್ಣಿಗೆ ತೊಂದರೆಯಾದರೆ ಕೂಡಲೇ ಚಿಕಿತ್ಸೆ ನೀಡಲು ಮಿಂಟೋ ನೇತ್ರಾಲಯ ಆಸ್ಪತ್ರೆ ಸಜ್ಜಾಗಿದೆ. ಪುರುಷರಿಗೆ ೧೦, ಮಹಿಳೆಯರಿಗೆ ೧೦, ಮಕ್ಕಳಿಗಾಗಿ ೧೫ ಸೇರಿ ೩೫ ಒಟ್ಟು ಬೆಡ್‌ಗಳನ್ನು ಒಳರೋಗಿಗಳಿಗಾಗಿ ಮೀಸಲಿಡಲಾಗಿದೆ. ಮೈಸೂರಿನ ಕೆ.ಆರ್.ಆಸ್ಪತ್ರೆಯಲ್ಲಿಯೂ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ. ಕೆ.ಆರ್. ಆಸ್ಪತ್ರೆಯಲ್ಲಿ ಪಟಾಕಿ ಸ್ಫೋಟದಿಂದ ಗಾಯಗೊಂಡವರ ಚಿಕಿತ್ಸೆಗೆ ವಿಶೇಷ ವಾರ್ಡ್ ಸ್ಥಾಪಿಸಲಾಗಿದೆ. ಈ ವಾರ್ಡ್‌ನಲ್ಲಿ ೧೫ ಬೆಡ್‌ಗಳನ್ನು ಮೀಸಲು ಮಾಡಲಾಗಿದೆ. ತುರ್ತು ಪರಿಸ್ಥಿತಿಯಲ್ಲಿ ಚಿಕಿತ್ಸೆಗೆ ಅಗತ್ಯವಿರುವ ವೈದ್ಯರು ಮತ್ತು ಸಿಬ್ಬಂದಿಯನ್ನು ನಿರಂತರ ಸೇವೆಗೆ ನಿಯೋಜಿಸಲಾಗಿದೆ. ಜಿಲ್ಲಾ ಆರೋಗ್ಯ ಇಲಾಖೆ ಮತ್ತು ಆಸ್ಪತ್ರೆ ಆಡಳಿತವು

ಪರಿಸ್ಥಿತಿಗೆ ಅನುಗುಣವಾಗಿ ಬೆಡ್‌ಗಳ ಸಂಖ್ಯೆಯನ್ನು ಹೆಚ್ಚಿಸುವ ವ್ಯವಸ್ಥೆ ಮಾಡಿದೆ. ಜನರು ಪಟಾಕಿ ಸಿಡಿಸುವಾಗ ಎಚ್ಚರಿಕೆ ವಹಿಸಬೇಕು ಅದರಲ್ಲೂ ಸಣ್ಣ ಮಕ್ಕಳು ಪಟಾಕಿ ಸಿಡಿಸುವಾಗ ಪೋಷಕರು ಅವರ ಪಕ್ಕದಲ್ಲೇ ಇದ್ದು ಜಾಗೃತೆ ವಹಿಸಬೇಕು ಎಂದು ಅಧಿಕಾರಿಗಳು ಸಲಹೆ ನೀಡಿದ್ದಾರೆ.

***************

ದಕ್ಷಿಣ ಕನ್ನಡ ಜಿಲ್ಲೆ ಕೋಮು ಸೌಹಾರ್ದತೆಗೆ ವಿಶೇಷ ಗಮನ ನೀಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನಲ್ಲಿಂದು ನಡೆದ ಖಾಸಗಿ ಸಮಾರಂಭದಲ್ಲಿ ಮಾತನಾಡಿದ ಅವರು, ಸಂವಿಧಾನ ಅರಿಯದೇ ಇದ್ದರೆ ಸಮಸಮಾಜ ನಿರ್ಮಾಣ ಅಸಾಧ್ಯ ಎಂದು ಹೇಳಿದ್ದಾರೆ.  ಜಿಲ್ಲೆಯಲ್ಲಿ ದಕ್ಷ ಜಿಲ್ಲಾಧಿಕಾರಿ ಹಾಗೂ ಪೊಲೀಸ್ ವರಿಷ್ಠಾಧಿಕಾರಿಯನ್ನು ನೇಮಕ ಮಾಡಲಾಗಿದ್ದು, ಶಾಂತಿ ಕಾಪಾಡುವಂತೆ ಮನವಿ ಮಾಡಿದ್ದಾರೆ. ಕೋಮು ಸೌಹಾರ್ದತೆ ಇದ್ದರೆ ರಾಜ್ಯ, ಜಿಲ್ಲೆಯ ಅಭಿವೃದ್ಧಿ ಸಾಧ ಎಂದು ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ (  28 ಸೆಕೆಂಡುಗಳು)

***************

ಇನ್ನು ಮೂರು ತಿಂಗಳಲ್ಲಿ ೧೩ ಸಾವಿರ ಶಿಕ್ಷಕರ ನೇಮಕಾತಿ ಮಾಡಿಕೊಳ್ಳಲಾಗುವುದು ಎಂದು ಪ್ರಾಥಮಿಕ ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ಶಿವಮೊಗ್ಗದಲ್ಲಿ ಮಾತನಾಡಿದ ಅವರು, ಇದೇ ೨೩ರಿಂದ ನವೆಂಬರ್ ೯ರವರೆಗೆ ರವರೆಗೆ ಅರ್ಜಿ ಸಲ್ಲಿಸಲು ಅವಕಾಶವಿದೆ ಎಂದು ಹೇಳಿದ್ದಾರೆ. ಡಿಸೆಂಬರ್ ೭ ರಂದು ಟಿಇಟಿ ಪರೀಕ್ಷೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ. ಅನುದಾನಿತ ಶಾಲೆಯ ಶಿಕ್ಷಕರ ನೇಮಕಾತಿಗೆ ಶೀಘ್ರದಲ್ಲಿಯೇ ಆದೇಶ ಹೊರಡಿಸಲಾಗುವುದು. ಕಲ್ಯಾಣ ಕರ್ನಾಟಕದಲ್ಲೂ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.  ರಾಜ್ಯದಲ್ಲಿ ೮೦೦ ಕೆಪಿಎಸ್ ಶಾಲೆಯನ್ನು ಆರಂಭಿಸಲಾಗುವುದು ಎಂದು ಹೇಳಿದ ಅವರು, ೬ ನೇ ತರಗತಿಯಿಂದ ಕನ್ನಡದ ಜೊತೆಗೆ ಇಂಗ್ಲೀಷ್ ಕಲಿಕೆಗೆ ಅವಕಾಶ ನೀಡಲಾಗುವುದು ಎಂದು ತಿಳಿಸಿದ್ದಾರೆ. ಇನ್ನುಳಿದ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಗೆ ಶಿಕ್ಷಕರನ್ನು ಬಳಸಿಕೊಳ್ಳುವುದಿಲ್ಲ ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ.

ಧ್ವನಿ : ಪ್ರಾಥಮಿಕ ಶಿಕ್ಷಣ ಸಚಿವ ಮಧು ಬಂಗಾರಪ್ಪ (  31 ಸೆಕೆಂಡುಗಳು)

***************

ಬಿಹಾರ ವಿಧಾನ ಸಭಾ ಚುನಾವಣೆಗಾಗಿ ರಾಜ್ಯದಲ್ಲಿ ಹಣ ಸಂಗ್ರಹಿಸಲಾಗುತ್ತಿದೆ ಎಂಬ ಆರೋಪ ಕುರಿತಂತೆ ಬಿಜೆಪಿ ನಾಯಕರು ದಾಖಲೆಗಳನ್ನು ಒದಗಿಸಲಿ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಸಂಸದ ರಾಘವೇಂದ್ರ ಹಿಟ್ ಆಂಡ್ ರನ್ ನಾಯಕರ ಪಟ್ಟಿಗೆ ಸೇರುವುದು ಬೇಡ ಎಂದು ಪ್ರತಿಕ್ರಿಯಿಸಿದ್ದಾರೆ. ಇದೇ ವೇಳೆ ದೀಪಾವಳಿಯಂದು ರಾಜ್ಯದ ಜನತೆ ಹಸಿರು ಪಟಾಕಿಯನ್ನು ಮಾತ್ರ ಬಳಸಬೇಕು ಎಂದು ಹೇಳಿದ್ದಾರೆ.

***************

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಸರಕಾರ ಆಡಳಿತದಲ್ಲಿ ವಿಫಲವಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಜಗದೀಶ್ ಶೆಟ್ಟರ್ ಆರೋಪಿಸಿದ್ದಾರೆ. ಧಾರವಾಡದಲ್ಲಿ  ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಗುತ್ತಿಗೆದಾರರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಸರಕಾರಿ ನೌಕರರಿಗೆ ಸರಿಯಾಗಿ ಸಂಬಳ ಕೊಡುತ್ತಿಲ್ಲ ಎಂದು ದೂರಿದ್ದಾರೆ. ಜನರ ಮನಸ್ಸನ್ನು ಬೇರೆಡೆ ಸೆಳೆಯಲು ಮುಖ್ಯಮಂತ್ರಿಗಳು ಮೊದಲಿಗೆ ಜಾತಿ ಸಮೀಕ್ಷೆ ಮಾಡಿಸಿದರು. ಈಗ ಪ್ರಿಯಾಂಕ್ ಖರ್ಗೆ ಮೂಲಕ ಪತ್ರ ಬರೆಸಲು ಶುರು ಮಾಡಿದ್ದಾರೆ ಎಂದು ವ್ಯಂಗ್ಯವಾಡಿದ್ದಾರೆ.

ಧ್ವನಿ : ಸಂಸದ ಜಗದೀಶ್ ಶೆಟ್ಟರ್ (  28 ಸೆಕೆಂಡುಗಳು)

***************

ಹಾಸನಾಂಬ ಉತ್ಸವದ ಸಾರ್ವಜನಿಕ ದರ್ಶನದ ಹನ್ನೊಂದನೇ ದಿನವಾದ ಇಂದು ಹೆಚ್ಚಿನ ಸಂಖ್ಯೆಯ ಭಕ್ತರು ಆಗಮಿಸಿ ದೇವರ ದರ್ಶನ ಪಡೆದರು. ಸಾರ್ವಜನಿಕ ದರ್ಶನಕ್ಕೆ ಇನ್ನೆರಡು ದಿನಗಳ ಕಾಲ ಅವಕಾಶ ನೀಡಲಾಗಿದ್ದು, ಇಂದು ವಿಪಕ್ಷ ನಾಯಕ ಆರ್ ಅಶೋಕ, ಮಾಜಿ ಸಚಿವ ಕೆ.ಎಸ್ ಈಶ್ವರಪ್ಪ, ಶಾಸಕ ಜಿ.ಟಿ ದೇವೇಗೌಡ, ಪರಿಷತ್ ಮಾಜಿ ಸದಸ್ಯ ಗೋಪಾಲಸ್ವಾಮಿ, ಸೇರಿದಂತೆ ಹಲವು ಜನಪ್ರತಿನಿಧಿಗಳು ಹಾಗೂ ಚಲನಚಿತ್ರ ನಟ ನಟಿಯರು  ಆಗಮಿಸಿ ದೇವರ ದರ್ಶನ ಪಡೆದರು. ಬುಧವಾರ ಸಾರ್ವಜನಿಕ ದರ್ಶನಕ್ಕೆ ಅಂತಿಮ ದಿನವಾಗಿದ್ದು, ಗುರುವಾರ

ಮಧ್ಯಾಹ್ನ ಶಾಸ್ತ್ರೋಕ್ತವಾಗಿ ಗಣ್ಯರ ಸಮ್ಮುಖದಲ್ಲಿ ಹಾಸನಾಂಬ ದೇವಿಯ ಗರ್ಭಗುಡಿ ಬಾಗಿಲು ಬಂದ್ ಆಗಲಿದೆ ಎಂದು ಹಾಸನ ಜಿಲ್ಲಾಡಳಿತ ಮಾಹಿತಿ ನೀಡಿದೆ.

***************

ನಾಡಿನೆಲ್ಲೆಡೆ ದೀಪಾವಳಿ ಹಬ್ಬದ ಸಂಭ್ರಮ ಮನೆಮಾಡಿದೆ. ಇಂದು ದುಷ್ಟ ಶಿಕ್ಷಣ ಶಿಷ್ಟ ರಕ್ಷಣೆಯ ಸಂಕೇತವಾಗಿರುವ ನರಕ ಚತುರ್ದಶಿ ಹಬ್ಬವನ್ನು ಆಚರಿಸಲಾಗುತ್ತಿದೆ. ಚಿಕ್ಕಮಗಳೂರು ಜಿಲ್ಲೆಯಾದ್ಯಂತ ದೀಪಾವಳಿ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಜಿಲ್ಲೆಯ ಮಲೆನಾಡು ಭಾಗದ ಹಲವೆಡೆ ಲಕ್ಕೆ ಹಬ್ಬವನ್ನು ಆಚರಿಸಲಾಗುತ್ತಿದೆ. ರೈತರು ತಮ್ಮ ಹೊಲ ಗದ್ದೆಗಳಿಗೆ ತೆರಳಿ ಭತ್ತ, ರಾಗಿ ಸೇರಿ ತಾವು ಬೆಳೆದ ಧಾನ್ಯಗಳ ಸಸಿಗಳನ್ನು ಹಾಗು ಲಕ್ಕೆ ಗಿಡದ ಸೊಪ್ಪನ್ನು ತಂದು ಮನೆಯಲ್ಲಿ ಪೂಜಿಸುತ್ತಾರೆ.

***************

ಯಾದಗಿರಿ ಜಿಲ್ಲೆಯ ಗುರುಮಠಕಲ್ ನಲ್ಲಿ ಹತ್ತಿ ಮಿಲ್ ಗೋದಾಮಿನಲ್ಲಿ ೪೩.೭೯ ಲಕ್ಷ ರೂಪಾಯಿ ಮೌಲ್ಯದ ಪಡಿತರ ಧಾನ್ಯವನ್ನು ಅಕ್ರಮವಾಗಿ ದಾಸ್ತಾನು ಮಾಡಿದ ಆರೋಪದಡಿ ಮಿಲ್ ಮಾಲೀಕನ ವಿರುದ್ಧ ಪ್ರಕರಣ ದಾಖಲಾಗಿದೆ. ೩ ಸಾವಿರದ ೯೮೫ ಕ್ವಿಂಟಲ್ ಪಡಿತರ ಅಕ್ಕಿ ಅಕ್ರಮ ದಾಸ್ತಾನು ಪ್ರಕರಣದಲ್ಲಿ ಸಿಐಡಿ ತನಿಖೆ ಎದುರಿಸುತ್ತಿರುವ ಅಯ್ಯಪ್ಪ ನರೇಂದ್ರ ರಾಠೋಡ ವಿರುದ್ಧ ಈಗ ಮತ್ತೊಂದು ಪ್ರಕರಣ ದಾಖಲಾಗಿದ್ದು, ಪಡಿತರ ಧಾನ್ಯಗಳನ್ನು ಜಪ್ತಿ ಮಾಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

***************

ಕರ್ನಾಟಕದ ದಕ್ಷಿಣ ಒಳನಾಡಿನಲ್ಲಿ ಈಶಾನ್ಯ ಮುಂಗಾರು ತೀವ್ರವಾಗಿದ್ದು, ಕರಾವಳಿ ಕರ್ನಾಟಕ ಮತ್ತು ಉತ್ತರ ಒಳನಾಡಿನಲ್ಲಿ ಸಾಮಾನ್ಯವಾಗಿತ್ತು. ಕರಾವಳಿ ಕರ್ನಾಟಕ ಮತ್ತು ದಕ್ಷಿಣ ಒಳನಾಡಿನ ಹೆಚ್ಚಿನ ಸ್ಥಳಗಳಲ್ಲಿ ಮತ್ತು ಉತ್ತರ ಒಳನಾಡಿನಲ್ಲಿ ಒಂದು ಅಥವಾ ಎರಡು ಸ್ಥಳಗಳಲ್ಲಿ ಮಳೆಯಾಗಿದೆ. ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಇಂದು ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ. ತುಮಕೂರು, ದಾವಣಗೆರೆ, ಚಿಕ್ಕಮಗಳೂರು ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಒಂದು ಅಥವಾ ಎರಡು ಸ್ಥಳಗಳಲ್ಲಿ ಗಂಟೆಗೆ ೩೦-೪೦ ಕಿಲೋ ಮೀಟರ್

ವೇಗದ ಬಿರುಗಾಳಿಯೊಂದಿಗೆ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ. ಬೆಂಗಳೂರು, ಹಾಸನ, ಚಿತ್ರದುರ್ಗ, ಕೊಡಗು, ಮೈಸೂರು, ಕೋಲಾರ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಹವಾಮಾನ ಇಲಾಖೆ ಮಳೆಯಾಗುವ ಮುನ್ಸೂಚನೆ ನೀಡಿದೆ.

***************

ನಾಳೆ ಪೊಲೀಸ್ ಹುತಾತ್ಮರ ದಿನಾಚರಣೆ. ಉತ್ತರ ಕನ್ನಡ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಪೊಲೀಸ್ ಹುತಾತ್ಮರ ದಿನಾಚರಣೆಯನ್ನು ನಾಳೆ ಕಾರವಾರದ ಪೊಲೀಸ್ ಕವಾಯತು ಮೈದಾನದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪ್ರಭಾರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಮಾಯಣ್ಣ ಬಿ.ಎಲ್, ಗೌರವ ಅತಿಥಿಗಳಾಗಿ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ, ಭಾಗವಹಿಸಲಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್. ತಿಳಿಸಿದ್ದಾರೆ.

***************